# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ವಾಣಿ    ದಿನಾಂಕ : DATE : 18/6/2020

### ಸಚಿವಾಲಯದ 18 ಜನ ಕ್ವಾರಂಟೈನ್

**ಬೆಂಗಳೂರು:** ಕರೊನಾ ಕಾಣಿಸಿಕೊಂಡ ಆಹಾರ ಸಚಿವಾಲಯದ 18 ಜನ ಸಿಬ್ಬಂದಿಯನ್ನು ಸಾಂಸ್ಥಿಕ ಕ್ವಾರಂಟೈನ್‌ನಲ್ಲಿಡಲಾಗಿದೆ. ವಿಕಾಸಸೌಧದಲ್ಲಿರುವ ಆಹಾರ ಸಚಿವಾಲಯದ ಮಹಿಳಾ ಸಿಬ್ಬಂದಿಗೆ ಮಂಗಳವಾರ ಕರೊನಾ ದೃಢಪಟ್ಟ ಹಿನ್ನೆಲೆಯಲ್ಲಿ ಕೋವಿಡ್ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಅವರೊಂದಿಗೆ ಪ್ರಾಥಮಿಕ ಸಂಪರ್ಕದಲ್ಲಿದ್ದ ಇಲಾಖೆಯ 18 ಜನರನ್ನು ಶಿವಾಜಿನಗರದ ಹೋಟೆಲ್‌ವೊಂದರಲ್ಲಿ ಕ್ವಾರಂಟೈನ್‌ನಲ್ಲಿಡಲಾಗಿದೆ.

» **ಆತಂಕದಿಂದ ಗೈರಾದ ನೌಕರರು**

**ಸಿಬ್ಬಂದಿ ಗೈರು:** ವಿಕಾಸಸೌಧದ ಮೊದಲ ಮಹಡಿಯಲ್ಲಿದ್ದ ಕಚೇರಿ ಸಿಬ್ಬಂದಿಗೆ ಕರೊನಾ ಕಾಣಿಸಿಕೊಂಡು ಸೀಲ್‌ಡೌನ್ ಮಾಡಿರುವ ಹಿನ್ನೆಲೆಯಲ್ಲಿ ಬುಧವಾರ ವಿಕಾಸಸೌಧದಲ್ಲಿ ಅನೇಕ ನೌಕರರು ಕರ್ತವ್ಯಕ್ಕೆ ಗೈರು ಹಾಜರಾಗಿದ್ದರು. 55 ವರ್ಷಕ್ಕಿಂತ ಮೇಲ್ಪಟ್ಟವರು ಹಾಗೂ ಬೇರೆ ಬೇರೆ ಕಾಯಿಲೆಗಳಿಂದ ಬಳಲುತ್ತಿರುವ ಸಿಬ್ಬಂದಿ ಕಚೇರಿಗೆ ಬರಲಿಲ್ಲ ಎಂದು ಹೇಳಲಾಗುತ್ತಿದೆ.